ಬಿಜಾಪುರ ಜಿಲ್ಲೆಯಲ್ಲಿ ಪ್ರಾಥಮಿಕ ಶಾಲೆಗಳಲ್ಲಿ ಶಿಕ್ಷಕರ ಕೊರತೆ

೫೯೭೨. ಮನೋಹರ ಐನಾಪುರ (ಬಳ್ಳೊಳ್ಳಿ).—ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

(ಅ) ಬಿಜಾಪುರ ಜಿಲ್ಲೆಯ ಅನೇಕ ಪ್ರಾಥಮಿಕ ಶಾಲೆಗಳಲ್ಲಿ ಒಂದು ಅಥವಾ ಎರಡು ಉಪಾಧ್ಯಾಯರು ಮಾತ್ರ ಬೋಧಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ?

(ಆ) ಹಾಗಿದ್ದಲ್ಲಿ ದಿನಕ್ಕೆ ೭ ವಿಭಾಗಗಳಲ್ಲಿ ಪಾಠ ಮಾಡುವುದು ಅವರಿಗೆ ಕಷ್ಟವಲ್ಲವೆ ?

(ಇ) ಹಾಗಿದ್ದಲ್ಲಿ ಈ ಸಮಸ್ಯೆಯನ್ನು ಬಗೆಹರಿಸಲು ಸರ್ಕಾರವು ಕ್ರಮ ಕೈಗೊಳ್ಳುವುದೆ.

ಶ್ರೀ ಕೆ. ಎಚ್. ರಂಗನಾಥ್ (ಶಿಕ್ಷಣ ಮಂತ್ರಿಗಳು).—

(ಅ) ಬಂದಿದೆ.

(ಆ) ಹೌದು.

(ಇ) ಹೌದು.

ಚಿಕ್ಕಪೇಟೆ ಕ್ಷೇತ್ರದ ಸರ್ಕಾರಿ ಪ್ರಾಥಮಿಕ, ಮಾಧ್ಯಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಪೀಠೋಪಕರಣ ಮತ್ತು ಇತರೆ ಸಾಮಗ್ರಿಗಳ ಕೊರತೆ

೬೨೫. ಶ್ರೀ ಪೆರಿಕಾಲ್ ಎಂ. ವಲ್ಲಪ್ಪ (ಚಿಕ್ಕಪೇಟೆ).—ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.—

(ಅ) ಚಿಕ್ಕಪೇಟೆ ವಿಧಾನ ಸಭಾ ಕ್ಷೇತ್ರದಲ್ಲಿ ಪೀಠೋಪಕರಣ ಮತ್ತು ಭೋದನಾ ಸಾಮಗ್ರಿ ಕೊರತೆ ಇರುವ ಸರ್ಕಾರಿ ಪ್ರಾಥಮಿಕ, ಮಾಧ್ಯಮಿಕ ಹಾಗೂ ಪ್ರೌಢ ಶಾಲೆಗಳ ಹೆಸರುಗಳು;

(ಆ) ಮೇಲಿನ ಸರ್ಕಾರಿ ಶಾಲೆಗಳಿಗೆ ಪೀಠೋಪಕರಣ ಮತ್ತು ಇತರೆ ಸಾಮಗ್ರಿಗಳನ್ನು ಒದಗಿಸಲು ಕೈಗೊಂಡ ಕ್ರಮಗಳೇನು ;

(ಇ) ಚಿಕ್ಕಪೇಟೆ ವಿಧಾನ ಸಭಾ ಕ್ಷೇತ್ರದಲ್ಲಿರುವ ವಿವಿಧ ಸರ್ಕಾರಿ ಪ್ರಾಥಮಿಕ ಮಾಧ್ಯಮಿಕ ಹಾಗೂ ಪ್ರೌಢ ಶಾಲೆಗಳಿಗೆ ೧೯೮೯–೯೦ನೇ ಸಾಲಿನಲ್ಲಿ ಪೀಠೋಪಕರಣ ಮತ್ತು ಭೋದನಾ ಸಾಮಗ್ರಿಗಳಿಗೆ ಖರ್ಚು ಮಾಡಿದ ಹಣ.

ಶ್ರೀ ಕೆ. ಹೆಚ್. ರಂಗನಾಥ್ (ಶಿಕ್ಷಣ ಮಂತ್ರಿಗಳು) —

(ಅ) ಪಟ್ಟಿಯನ್ನು ಲಗತ್ತಿಸಿದೆ.

ಪ್ರಾಥಮಿಕ ಶಾಲೆಗಳು

(ಆ) ೧. ಶಾಲಾಭಿವೃದ್ಧಿ ಸಮಿತಿಗಳಿಂದ ಸುಮಾರು ೬೫೪೦ ರೂಪಾಯಿಗಳನ್ನು ಸಂಗ್ರಹಿಸಿ ಆ ಮೊತ್ತದ ಪೀಠೋಪಕರಣ ಮತ್ತು ಪಾಠೋಪಕರಣಗಳನ್ನು ಈ ಶಾಲೆಗಳಿಗೆ ಒದಗಿಸಲಾಗಿದೆ.

೨. ಕೇಂದ್ರ ಪುರಸ್ಕೃತ ಯೋಜನೆಯಡಿಯಲ್ಲಿ ರೂ. ೧೩೫೪–೪೫ ಮೌಲ್ಯದ ಟು–ಇನ್–ಒನ್ ರೇಡಿಯೋ ಮತ್ತು – ಕ್ಯಾಸೆಟ್ ಪ್ಲೇಯರ್‌ಗಳನ್ನು ಒದಗಿಸಲಾಗಿದೆ. ಮತ್ತು ೧,೨೦೦ ರೂ. ಮೌಲ್ಯದ ವಿಜ್ಞಾನದ ಕಿಟ್‌ಗಳನ್ನು ಒದಗಿಸಲಾಗಿದೆ.

೩. ೧೯೯೦–೯೧ನೇ ಸಾಲಿನ ಯೋಜನಾ ಆಯವ್ಯಯದಲ್ಲಿ ಪ್ರಾಥಮಿಕ ಶಾಲೆಗಳಿಗೆ ಪೀಠೋಪಕರಣಗಳಿಗೆಂದು ೫೦,೦೦೦ ರೂ.ಗಳನ್ನು ಒದಗಿಸಲಾಗಿದೆ.